**ಜಿಲ್ಲಾ ಅಧಿಕಾರಿಗಳ ಕಾರ್ಯಾಲಯ**
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು.
ಡಾ॥ ಬಾಬು ಜಗಜೀವನ್‌ರಾಂ ಭವನ, ಆದಿಪಂಪ ರಸ್ತೆ, ನಾರಾಯಣಸ್ವಾಮಿ ಬ್ಲಾಕ್, ಪಡುವಾರಹಳ್ಳಿ ಪೂರ್ವ ಬಡಾವಣೆ, ಮೈಸೂರು-02
E-mail – dobcmmysore1@gmail.com Ph No:0821- 2342917

ಸಂ:ಹಿಂವಕಇ/ಬಿ3/ಸಿಆರ್-91/2015-16 ದಿನಾಂಕ:05-09-2017

# ಅಧಿಸೂಚನೆ

ಸರ್ಕಾರದ ಆದೇಶ ಸಂಖ್ಯೆ:ಹಿಂವಕ/336/ಬಿಇಟಿ/2015 ದಿನಾಂಕ:05.11.2015 ಹಾಗೂ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 90 ಬಿಇಟಿ 2016 (ಭಾಗ-2), ಬೆಂಗಳೂರು. ದಿನಾಂಕ: 29.09.2016, 02.06.2017 ರನ್ವಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಇರುವ 58 ಅಡುಗೆಯವರು ಹುದ್ದೆಗಳಿಗೆ, 92 ಅಡುಗೆ ಸಹಾಯಕರ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅಧಿಸೂಚನೆ ಹೊರಡಿಸಲಾಗಿತ್ತು. ಅದರಂತೆ, ಅಗತ್ಯ ಕ್ರಮಕೈಗೊಂಡು ಅಂತಿಮ ಆಯ್ಕೆ ಪಟ್ಟಿಯನ್ನು ದಿನಾಂಕ: 14-08-2017 ರಂದು ಪ್ರಕಟಿಸಲಾಗಿರುತ್ತದೆ. ಸದರಿ ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಂದ ದಿನಾಂಕ: 21-08-2017ರಂದು ಮೂಲ ದಾಖಲೆಗಳನ್ನು ಪಡೆಯಲಾಗಿರುತ್ತದೆ.

ಮುಂದುವರೆದಂತೆ, ದಿನಾಂಕ: 21-08-2017ರಂದು ಹಾಜರಾಗಿ ಮೂಲ ದಾಖಲೆಗಳನ್ನು ಸಲ್ಲಿಸಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಸಂಬಂಧ ಸಿಂಧುತ್ವ ಪ್ರಮಾಣ ಪತ್ರ ಮತ್ತು ಪೋಲೀಸ್ ಪರಿಶೀಲನಾ ವರದಿ ಪಡೆಯಲು ತಮ್ಮ ತಮ್ಮ ಜಿಲ್ಲೆಯ ಸಂಬಂಧಪಟ್ಟ ಪ್ರಾಧಿಕಾರಕ್ಕೆ ಪತ್ರಗಳನ್ನು ಬರೆಯಲಾಗಿರುತ್ತದೆ (ಸದರಿ ಪತ್ರವನ್ನು ಲಗತ್ತಿಸಿದೆ).

ಅದರಂತೆ, ಎಲ್ಲಾ ಅಭ್ಯರ್ಥಿಗಳು ಸಂಬಂಧಪಟ್ಟ ಪ್ರಾಧಿಕಾರದಿಂದ ಸಿಂಧುತ್ವ ಪ್ರಮಾಣ ಪತ್ರ ಮತ್ತು ಪೋಲೀಸ್ ಪರಿಶೀಲನಾ ವರದಿಯನ್ನು ಮಾಡಿಸಲು ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ ಹಾಗೂ ವೈದ್ಯಕೀಯ ಪ್ರಮಾಣ ಪತ್ರವನ್ನು ತಮ್ಮ ಜಿಲ್ಲೆಯ ಡಿಸ್ಟ್ರಿಕ್ಟ್ ಸರ್ಜನ್(ಜಿಲ್ಲಾ ಶಸ್ತ್ರಚಿಕಿತ್ಸಕರು) ಅಥವಾ ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ನೇಮಕಾತಿ ಸಮಯದಲ್ಲಿ ಸಲ್ಲಿಸುವುದು.

ಸಾಮಾನ್ಯ ಅಭ್ಯರ್ಥಿ ಕೋಟಾದಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳನ್ನು ಹೊರತುಪಡಿಸಿ ಇನ್ನುಳಿದ ಎಲ್ಲಾ ಅಭ್ಯರ್ಥಿಗಳು ಸಿಂಧುತ್ವ ಪ್ರಮಾಣ ಪತ್ರವನ್ನು ಪಡೆಯಬೇಕಾಗಿರುತ್ತದೆ. ಯಾವುದೇ ಹೆಚ್ಚಿನ ಮಾಹಿತಿ ಅಗತ್ಯತೆ ಇದ್ದಲ್ಲಿ ಈ ಕೆಳಕಂಡ ವಿಳಾಸಕ್ಕೆ ಸಂಪರ್ಕಿಸಲು ಸೂಚಿಸಿದೆ.

ವಿಳಾಸ:- **ಜಿಲ್ಲಾ ಅಧಿಕಾರಿಗಳ ಕಛೇರಿ**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಡಾ॥ ಬಾಬು ಜಗಜೀವನರಾಂ ಭವನ, ಆದಿಪಂಪ ರಸ್ತೆ,**
**ನಾರಾಯಣಸ್ವಾಮಿ ಬ್ಲಾಕ್, ಪಡುವಾರಹಳ್ಳಿ ಪೂರ್ವ ಬಡಾವಣೆ,**
**ಮೈಸೂರು-02**

ನೇಮಕಾತಿ ಪ್ರಾಧಿಕಾರ: ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮೈಸೂರು ಜಿಲ್ಲೆ.

ಸದಸ್ಯ ಕಾರ್ಯದರ್ಶಿ
ಜಿಲ್ಲಾ ಮಟ್ಟದ ಗ್ರೂಪ್-ಡಿ ನೇಮಕಾತಿ
ಪ್ರಾಧಿಕಾರ ಹಾಗೂ ಜಿಲ್ಲಾ ಅಧಿಕಾರಿಗಳು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಮೈಸೂರು ಜಿಲ್ಲೆ, ಮೈಸೂರು.

F:\D Group recruitment\D Group Covering Letter.docx